**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 13(139) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು |
| 3 | ಉತ್ತರಿಸಬೇಕಾದ ದಿನಾಂಕ | 08.12.2025 |
| 4 | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ. | ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸಕರ ನಿರ್ಲಕ್ಷ್ಯದಿಂದ ಒಬ್ಬ ರೋಗಿಯ ಹೊಟ್ಟೆಯ ಗಡ್ಡೆಯ ಬದಲಿಗೆ ಕರುಳನ್ನು ತೆಗೆದು ಹಾಕಿದ್ದು, ಜಿಲ್ಲಾದ್ಯಂತ ಸುದ್ದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.ಆದರೆ ಪರಿಶೀಲಿಸಲಾಗಿ, ರೋಗಿಯು ದೀರ್ಘಕಾಲದ ಮದ್ಯವ್ಯಸನಿ ಹಾಗೂ ತಂಬಾಕು ಅಗಿಯುವ ಇತಿಹಾಸವನ್ನು ಹೊಂದಿದ್ದು, ರೋಗಿಗೆ ಅಪೇಂಡಿಕ್ಸ್ / ಕರುಳಿನ ರಂಧ್ರ ಇರುವುದು ತಾಲ್ಲೂಕ ಆಸ್ಪತ್ರೆಯಿಂದ ನೀಡಿದ ಶಿಫಾರಸ್ಸು ಪತ್ರದಲ್ಲಿ ನಮೂದಿಸಲಾದ ಕಾರಣ, ಸದರಿ ರೋಗಿಗೆ ನಿಯಮಿತ ತನಿಖೆಗಳು, ಯುಎಸ್‌ಜಿ ಪರೀಕ್ಷೆ, ಸೋನಾಗ್ರಾಫಿ ಪರೀಕ್ಷೆಗಳನ್ನು ನಡೆಸಿದಾಗ ಅಪೇಂಡಿಕ್ಯೂಲರ್ ರಂಧ್ರ ಇರುವುದು ಕಂಡುಬರುತ್ತದೆ. ದಿನಾಂಕ:20/6/2025ರಂದು ಶಸ್ತ್ರ ಚಿಕಿತ್ಸೆ ಸಂದರ್ಭದಲ್ಲಿ ಲ್ಯಾಪ್ರೋಟಮಿ ನಡೆಸಲಾಗಿದ್ದು, ಅಪೇಂಡಿಕ್ಸ್ ತುದಿಯಲ್ಲಿ ಉಬ್ಬಿಕೊಂಡಿರುವುದು ಕಂಡುಬಂದ ನಿಮಿತ್ತ ಅಪೇಂಡಿಸೆಕ್ಟಮಿ ಮಾಡಲಾಗಿದೆ. ಶಸ್ತ್ರ ಚಿಕಿತ್ಸೆಯ ಸಮಯದಲ್ಲಿ ಕರುಳನ್ನು ಪರೀಕ್ಷಿಸಿದ್ದು, ಕರುಳು ಸಾಮಾನ್ಯವಾಗಿದ್ದುದರಿಂದ ಕರುಳನ್ನು ತೆಗೆದಿರುವುದಿಲ್ಲವೆಂದು ಸಂಸ್ಥೆಯು ವರದಿಯಲ್ಲಿ ಸಲ್ಲಿಸಿರುತ್ತದೆ. ಕಾಲಕಾಲಕ್ಕೆ ರೋಗಿಗೆ ಚಿಕಿತ್ಸೆ/ಪರೀಕ್ಷೆ ನಡೆಸುತ್ತಿದ್ದಾಗ್ಯೂ ವೈದ್ಯಕೀಯ ಸಲಹೆಯ ವಿರುದ್ಧವಾಗಿ ರೋಗಿಯನ್ನು ರೋಗಿಯ ಸಂಬಂಧಿಕರು ದಿನಾಂಕ: 22/6/2025ರಂದು ಬಿಮ್ಸ್ ಸಂಸ್ಥೆಯಿಂದ ಕರೆದೊಯ್ಯಲಾಗಿದೆ. ರೋಗಿಗೆ ಬಿಮ್ಸ್ ಸಂಸ್ಥೆಯಲ್ಲಿ ಶಸ್ತ್ರಚಿಕಿತ್ಸೆಯ ವೇಳೆಯಲ್ಲಿ ವೈದ್ಯರಿಂದ ಯಾವುದೇ ನಿರ್ಲಕ್ಷ್ಯತೆ ಆಗಿರುವುದಿಲ್ಲ. |
| ಆ. | ಬಂದಿದ್ದಲ್ಲಿ, ಈ ರೀತಿ ನಿರ್ಲಕ್ಷ್ಯಕ್ಕೆ ಕಾರಣಗಳೇನು; ಶಸ್ತ್ರಚಿಕಿತ್ಸಕರನ್ನು ನೇಮಿಸಿಕೊಳ್ಳುವಾಗ ನಿಯಮಾವಳಿಗಳನ್ನು ಆಸ್ಪತ್ರೆ ವತಿಯಿಂದ ಪಾಲಿಸಲಾಗಿಲ್ಲವೆ; ಕಳೆದ ಮೂರು ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ; ತಪ್ಪಿತಸ್ಥ ವೈದ್ಯರು ಮತ್ತು ಆಡಳಿತ ಮಂಡಳಿ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಶಸ್ತ್ರಚಿಕಿತ್ಸಕರನ್ನು ನೇಮಿಸಿಕೊಳ್ಳುವಾಗ ಎನ್.ಎಮ್.ಸಿ ನಿಯಮಾವಳಿಯಂತೆ ಹಾಗೂ ವೃಂದ ಮತ್ತು ನೇಮಕಾತಿ ನಿಯಮಾವಳಿಯಂತೆ ಆಯಾ ವಿಭಾಗಕ್ಕೆ ಅವಶ್ಯಕವಿರುವ ವಿದ್ಯಾರ್ಹತೆಯನ್ನು ಹಾಗೂ ಸೇವಾ ಅನುಭವವನ್ನು ಹೊಂದಿರುವ ಅಭ್ಯರ್ಥಿಗಳ ದಾಖಲಾತಿಗಳನ್ನು ಪರಿಶೀಲಿಸಿ, |

| | | |
|---|---|---|
| | | ದೃಢಪಡಿಸಿಕೊಂಡ ನಂತರ ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲಾಗುತ್ತದೆ.<br>ಕಳೆದ ಮೂರು ವರ್ಷಗಳಿಂದ ಇಂತಹ ಯಾವುದೇ ಪ್ರಕರಣಗಳು ಬಿಮ್ಸ್, ಬೆಳಗಾವಿ ಸಂಸ್ಥೆಯಲ್ಲಿ ನಡೆದಿರುವುದಿಲ್ಲ. ಆದ್ದರಿಂದ ಕ್ರಮವಹಿಸುವ ಪ್ರಶ್ನೆ ಉದ್ಭವವಾಗುವುದಿಲ್ಲ. |
| ಇ | ಈ ಹಿಂದೆ ಸರ್ಕಾರದ ವತಿಯಿಂದ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆವರಣದಲ್ಲಿ ಕ್ಯಾನ್ಸರ್ ಆಸ್ಪತ್ರೆಯನ್ನು ನಿರ್ಮಿಸಿ ಬಡ ರೋಗಿಗಳಲ್ಲಿ ಅತೀ ಕಡಿಮೆ ವೆಚ್ಚದಲ್ಲಿ ಚಿಕಿತ್ಸೆ ನೀಡಲಾಗುವುದು ಎಂದು ಸರ್ಕಾರ ಘೋಷಣೆ ಮಾಡಿದ್ದು, ಸದರಿ ಕಾಮಗಾರಿಯ ಪ್ರಸ್ತುತ ಹಂತವೇನು; | 2022-23ನೇ ಆಯವ್ಯಯ ಘೋಷಣೆಯಲ್ಲಿ ರೂ. 50.00 ಕೋಟಿ ವೆಚ್ಚದಲ್ಲಿ ಬೆಳಗಾವಿ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ಸ್ಥಾಪಿಸಲು ಘೋಷಿಸಿದ್ದು, ಅದರಂತೆ, ದಿನಾಂಕ:25.06.2025 ರಂದು ಬಿಮ್ಸ್ ಆವರಣದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಿಸಲು ನಿರ್ದೇಶಕರು, ಕಿದ್ವಾಯಿ ಸ್ಮಾರಕ ಗಂಥಿ, ಬೆಂಗಳೂರು ಇವರಿಗೆ ಸ್ಥಳವನ್ನು ಹಸ್ತಾಂತರಿಸಲಾಗಿದೆ.<br>ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 43 ಕೆಯುಎಂ 2022, ದಿನಾಂಕ: 5.11.2025 ರಲ್ಲಿ ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಕಿದ್ವಾಯಿ ಪ್ರಾದೇಶಿಕ (ಪೆರಿಫೆರಲ್) ಕ್ಯಾನ್ಸರ್ ಕೇಂದ್ರವನ್ನು ಸ್ಥಾಪಿಸಲು 50 ಹಾಸಿಗೆಗಳ ಸಾಮರ್ಥ್ಯದ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ 35.00 ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.<br><br>ಅದರಂತೆ ಮುಖ್ಯ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ಘಟಕ, ಬೆಂಗಳೂರು, ರವರು ಕಾಮಗಾರಿಯನ್ನು ನಿರ್ವಹಿಸಲು ಈಗಾಗಲೇ ಟೆಂಡರ್ ಕರೆದಿದ್ದು, ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಈ. | ಕಾಮಗಾರಿಯನ್ನು ಇಲ್ಲಿಯವರೆಗೆ ಪ್ರಾರಂಭಿಸದಿರುವುದಕ್ಕೆ ಕಾರಣಗಳೇನು? | ಸದರಿ ಯೋಜನೆಗೆ ಅಗತ್ಯವಿರುವ ನಿವೇಶನ ಗುರುತಿಸುವಲ್ಲಿ ಹಾಗೂ ಹಸ್ತಾಂತರಿಸುವಲ್ಲಿ ಆದ ವಿಳಂಬದಿಂದ ಕಾಮಗಾರಿಯನ್ನು ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. |

**ಸಂಖ್ಯೆ:**ಎಂಇಡಿ 587 ಎಂಎಂಸಿ 2025

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು